# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **905** |
| ಉತ್ತರಿಸಬೇಕಾದ ದಿನಾಂಕ | : | 21.09.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯದ ಹಾಲಹಳ್ಳಿ ಬಡಾವಣೆ ಕೊಳಗೇರಿ ನಿವಾಸಿಗಳಿಗಾಗಿ ರಾಜೀವ್ ಗಾಂಧಿ ವಸತಿ ಯೋಜನೆಯಡಿ ನಿರ್ಮಿಸಿರುವ ಮನೆಗಳ ಸಂಖ್ಯೆ ಮತ್ತು ವೆಚ್ಚವೆಷ್ಟು; (ವಿವರ ನೀಡುವುದು) | ಮಂಡ್ಯ ನಗರದಲ್ಲಿ ಕೇಂದ್ರ ಪುರಸ್ಕೃತ ರಾಜೀವ್ ಆವಾಸ್ ಯೋಜನೆಯಡಿಯಲ್ಲಿ ಮಂಡ್ಯ ನಗರದ ಹಾಲಹಳ್ಳಿ ಸರ್ವೆ ನಂ: 14 ಮತ್ತು 16 ರ ಪ್ರದೇಶದಲ್ಲಿ ಈವರೆಗೆ 632 ಮನೆಗಳನ್ನು ನಿರ್ಮಿಸಿ ಪೂರ್ಣಗೊಳಿಸಲಾಗಿರುತ್ತದೆ. ಸದರಿ ಪೂರ್ಣಗೊಂಡಿರುವ 632 ಮನೆಗಳಿಗೆ ಆಗಸ್ಟ್-2022 ರ ಅಂತ್ಯಕ್ಕೆ ರೂ.46.17 ಕೋಟಿಗಳ ವೆಚ್ಚವಾಗಿರುತ್ತದೆ. |
| ಆ) | ಸರ್ಕಾರವು ಎರಡು ತಿಂಗಳ ಹಿಂದೆ ವಿತರಿಸಿದ್ದು, ಮನೆಗಳ ಹಕ್ಕುಪತ್ರಗಳನ್ನು ಕೊಳಚೆ ನಿರ್ಮೂಲನಾ ಮಂಡಳಿ ಅಧಿಕಾರಿಗಳು ವಾಪಸ್ಸು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಮಂಡ್ಯ ನಗರದ ಹಾಲಹಳ್ಳಿ ಬಡಾವಣೆಯಲ್ಲಿ ರಾಜೀವ್ ಆವಾಸ್ ಯೋಜನೆಯಡಿ ನಿರ್ಮಿಸಿರುವ ಮನೆಗಳ ಉದ್ಘಾಟನೆಯ ಕಾರ್ಯಕ್ರಮವನ್ನು ಎರಡು ತಿಂಗಳ ಹಿಂದೆ ಅಂದರೆ ದಿನಾಂಕ:02.07.2022 ರಂದು ನೆರವೇರಿಸಲಾಗಿರುತ್ತದೆ. ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ ಹತ್ತು ಫಲಾನುಭವಿಗಳಿಗೆ ಮನೆಗಳ ಹಂಚಿಕಾತಿ ಪತ್ರಗಳನ್ನು ನೀಡಲಾಗಿರುತ್ತದೆ. ಉಳಿದ ಫಲಾನುಭವಿಗಳಿಗೆ ಮನೆ ಹಂಚಿಕೆ ಪತ್ರದಲ್ಲಿ ಲಗತ್ತಿಸಲು ಕುಟುಂಬ ಸದಸ್ಯರ ಛಾಯಾಚಿತ್ರಗಳನ್ನು ನೀಡಲು ಕೋರಿದ್ದು, ಸದರಿಯವರಿಗೂ ಮನೆ ಹಂಚಿಕಾತಿ ಪತ್ರಗಳನ್ನು ವಿತರಿಸಲಾಗುತ್ತಿದ್ದು, ಈವರೆವಿಗೂ 90 ಮನೆ ಹಂಚಿಕೆದಾರರಿಗೆ ಹಂಚಿಕಾತಿ ಪತ್ರಗಳನ್ನು ವಿತರಿಸಲಾಗಿದೆ. ವಿತರಿಸಲಾಗಿರುವ ಯಾವುದೇ ಹಂಚಿಕೆ ಪತ್ರಗಳನ್ನು ಹಿಂಪಡೆಯಲಾಗಿರುವುದಿಲ್ಲ. |
| ಇ) | ಕೊಳಗೇರಿ ನಿವಾಸಿಗಳಿಗೆ ಮನೆಗಳನ್ನು ಹಂಚಿಕೆ ಮಾಡಿ, ಹಕ್ಕು ಪತ್ರಗಳನ್ನು ಎಷ್ಟು ದಿನಗಳೊಳಗಾಗಿ ವಿತರಿಸಲು ಉದ್ದೇಶಿಸಲಾಗಿದೆ ? | ಹಾಲಹಳ್ಳಿ ಬಡಾವಣೆಯಲ್ಲಿ ನಿರ್ಮಿಸಲಾಗಿರುವ 632 ಮನೆಗಳ ಪೈಕಿ ಈಗಾಗಲೇ 90 ಫಲಾನುಭವಿಗಳಿಗೆ ಮನೆ ಹಂಚಿಕೆ ಪತ್ರಗಳನ್ನು ವಿತರಿಸಲಾಗಿದ್ದು, ಉಳಿದ ಫಲಾನುಭವಿಗಳಿಗೆ ಅಗತ್ಯ ದಾಖಲಾತಿಗಳನ್ನು ಮತ್ತು ಕುಟುಂಬ ಸದಸ್ಯರ ಛಾಯಾಚಿತ್ರಗಳನ್ನು ನೀಡಲು ಈಗಾಗಲೇ ತಿಳಿಸಲಾಗಿದ್ದು, ತ್ವರಿತವಾಗಿ ಮನೆ ಹಂಚಿಕೆ ಪತ್ರಗಳನ್ನು ವಿತರಿಸಲು ಉದ್ದೇಶಿಸಲಾಗಿದೆ |

ಸಂಖ್ಯೆ :ವಇ 123 ಎಸ್‌ಬಿಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು